# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

**ಲೆಕ್ಕ ಪತ್ರ ಸ್ಥಾಯಿ ಸಮಿತಿಯು ದಿನಾಂಕ: 07-12-2016 ರಂದು ಬೆಳಿಗ್ಗೆ 11.00 ಗಂಟೆಗೆ ಯಲಹಂಕ ವಲಯ ಕಛೇರಿಯಲ್ಲಿ ನಡೆದ ಸಭೆಯ ನಡವಳಿಗಳು**

| ಕ್ರ. ಸಂ | ಹಾಜರಿದ್ದ ಸದಸ್ಯರು ಶ್ರೀಯುತರುಗಳಾದ | | ಹಾಜರಿದ್ದ ಅಧಿಕಾರಿಗಳು |
|---|---|---|---|
| 1. | ನೇತ್ರಾ ನಾರಾಯಣ್ | – ಅಧ್ಯಕ್ಷರು | ಉಪ ಆಯುಕ್ತರು (ಯಲಹಂಕ) |
| 2. | ಸವಿತಾ ವಿ.ಕೃಷ್ಣ | – ಸದಸ್ಯರು | ಸ.ನಿ.ಹಣಕಾಸು-ಯಲಹಂಕ |
| 3. | ಎನ್.ಉಮಾ | – ಸದಸ್ಯರು | ಕಂದಾಯ ಅಧಿಕಾರಿ (ಯಲಹಂಕ) |
| 4. | ರಾಧಮ್ಮ ವೆಂಕಟೇಶ್ | – ಸದಸ್ಯರು | ಎ.ಸಿ.ಆಡಿಟ್ ಸೆಲ್ |
| 5. | ಜಿ.ಬಾಲಕೃಷ್ಣನ್ | – ಸದಸ್ಯರು | ಸಂಬಂಧಪಟ್ಟ ಎಲ್ಲಾ ಕಾರ್ಯಪಾಲಕ |
| 6. | ವಿ.ಸುರೇಶ್ | – ಸದಸ್ಯರು | ಅಭಿಯಂತರರುಗಳು |
| 7. | ಹೆಚ್.ಕುಸುಮಾ | – ಸದಸ್ಯರು | ಸಂಬಂಧಪಟ್ಟ ಎಲ್ಲಾ ಸಹಾಯಕ |
| 8. | ಎಂ.ಮಾಲತಿ | – ಸದಸ್ಯರು | ಕಾರ್ಯಪಾಲಕ ಅಭಿಯಂತರರುಗಳು |
| 9. | ಎಂ.ಶಾಮಲ | – ಸದಸ್ಯರು | ಸಂಬಂಧಪಟ್ಟ ಎಲ್ಲಾ ಸಹ ಕಂದಾಯ |
| 10. | ಕೆ.ವಿ.ರಾಜೇಂದ್ರಕುಮಾರ್ | – ಸದಸ್ಯರು | ಅಧಿಕಾರಿಗಳು |
| 11. | ಎಂ.ಗೌತಮ್ ಕುಮಾರ್ | – ಸದಸ್ಯರು | ತೋಟಗಾರಿಕಾ ಅಧೀಕ್ಷಕರು (ಯಲಹಂಕ) |
| | | | ಆರೋಗ್ಯ ಅಧಿಕಾರಿಗಳು (ಯಲಹಂಕ) |

ಮೊದಲಿಗೆ ಯಲಹಂಕ ವಲಯ ಸಹಾಯಕ ನಿಯಂತ್ರಕರು (ಹಣಕಾಸು) ರವರು ಸಭೆಯಲ್ಲಿ ಹಾಜರಿದ್ದ ಸಮಿತಿಯ ಅಧ್ಯಕ್ಷರು, ಸದಸ್ಯರುಗಳಿಗೆ ಮತ್ತು ಅಧಿಕಾರಿಗಳಿಗೆ ಸ್ವಾಗತ ಕೋರಿ, ತಮ್ಮ ಪರಿಚಯವನ್ನು ಮಾಡಿಕೊಂಡು ನಂತರ ಸಮಿತಿಯ ಸದಸ್ಯರುಗಳು ಮತ್ತು ಅಧಿಕಾರಿಗಳು ಸಭೆಗೆ ತಮ್ಮ ಪರಿಚಯ ಮಾಡಿಕೊಳ್ಳುವಂತೆ ಕೋರಿದರು. ಅದರಂತೆ, ಹಾಜರಿದ್ದ ಸಮಿತಿಯ ಅಧ್ಯಕ್ಷರು, ಸದಸ್ಯರುಗಳು ಹಾಗೂ ಎಲ್ಲಾ ಅಧಿಕಾರಿಗಳು ಸಭೆಗೆ ತಮ್ಮ ಪರಿಚಯ ಮಾಡಿಕೊಂಡರು.

ಅಧ್ಯಕ್ಷರು ಮಾತನಾಡುತ್ತಾ, ಬೆಂಗಳೂರು ಮಹಾನಗರ ಪಾಲಿಕೆಯು ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯಾಗಿ ವಿಸ್ತಾರಗೊಂಡ ನಂತರದ ಅಂದರೆ 2006-07ನೇ ಸಾಲಿನಿಂದ ತಹಲ್‌ವರೆಗಿನ ಲೆಕ್ಕಪರಿಶೋಧನಾ ವರದಿಯನ್ನು ಪರಿಶೀಲಿಸಲು ಸಮಿತಿಯು ತೀರ್ಮಾನಿಸಿದ್ದು, ಅದರಂತೆ ಯಲಹಂಕ ವಲಯಕ್ಕೆ ಸಂಬಂಧಿಸಿದಂತೆ 2006-07ನೇ ಸಾಲಿನಿಂದ ಇದುವರೆಗಿನ ಲೆಕ್ಕಪರಿಶೋಧನಾ ವರದಿಯಲ್ಲಿ ಬಾಕಿ

ಇರುವ ಕಂಡಿಕೆಗಳು, ಆಕ್ಷೇಪಣೆಯಲ್ಲಿಟ್ಟಿರುವ ಮೊತ್ತ ಮತ್ತು ವಸೂಲಾತಿ ಮೊತ್ತದ ಬಗ್ಗೆ ಹಾಗೂ ಸದರಿ ಸಾಲುಗಳಿಗೆ ಸಂಬಂಧಿಸಿದ ಲೆಕ್ಕ ಪರಿಶೋಧನಾ ವರದಿಗಳಿಗೆ ಅನುಸರಣಾ ವರದಿಯನ್ನು ಸಲ್ಲಿಸಿರುವ ಬಗ್ಗೆ ವಿವರವಾದ ಮಾಹಿತಿಯನ್ನು ಸಭೆಗೆ ನೀಡಲು ಸೂಚಿಸಿದರು.

ನಂತರ ವಲಯ ಸಹಾಯಕ ನಿಯಂತ್ರಕರು (ಹಣಕಾಸು) ರವರಿಗೆ ಅವರ ಕಛೇರಿಯ ಕಾರ್ಯವ್ಯಾಪ್ತಿಯ ಬಗ್ಗೆ ಸಭೆಗೆ ಮಾಹಿತಿ ನೀಡಲು ಸೂಚಿಸಲಾಗಿ, ಸದರಿಯವರು ಲೆಕ್ಕ ಪರಿಶೋಧನಾ ವರದಿಯಲ್ಲಿನ ಆಕ್ಷೇಪಣೆ, ವಸೂಲಾತಿ ಮತ್ತು ತೀರುವಳಿಗೆ ಸಂಬಂಧಿಸಿದಂತೆ ವಲಯ ವ್ಯಾಪ್ತಿಯ ಕಛೇರಿಗಳಲ್ಲಿ ಕೈಗೊಂಡಿರುವ ಕ್ರಮಗಳ ಕುರಿತು ಚರ್ಚಿಸಲು ಈಗಾಗಲೇ ಸಭೆಗಳನ್ನು ನಡೆಸಿರುವುದಾಗಿ ತಿಳಿಸಿದ್ದು, ಆದಾಗ್ಯೂ ಆಡಿಟ್ ವರದಿಗಳಿಗೆ ಸಮರ್ಪಕವಾಗಿ ಉತ್ತರಗಳನ್ನು ಸಲ್ಲಿಸುವಲ್ಲಿ ಅಧಿಕಾರಿ/ಸಿಬ್ಬಂದಿಗಳು ವಿಫಲರಾಗಿರುತ್ತಾರೆ, ಈ ನಿಟ್ಟಿನಲ್ಲಿ ಇನ್ನು ಮುಂದೆ ಸಕ್ರಿಯವಾಗಿ ಕಾರ್ಯನಿರ್ವಹಿಸುವುದಾಗಿ ತಿಳಿಸಿದರು. ಆಗ ಸದಸ್ಯರಾದ ಶ್ರೀಯುತ ಗೌತಮ್ ಕುಮಾರ್ ರವರು ವಲಯ ಮಟ್ಟದಲ್ಲಿ ಸಭೆಗಳನ್ನು ನಡೆಸಿರುವ ಬಗ್ಗೆ ತಯಾರಿಸಿರುವ ನಡವಳಿಗಳನ್ನು ಸಲ್ಲಿಸಲು ಸೂಚಿಸಿದಾಗ, ಸಹಾಯಕ ನಿಯಂತ್ರಕರು ಸಭೆಯನ್ನು ನಡೆಸಿರುವ ಕುರಿತು ಯಾವುದೇ ನಡವಳಿಗಳನ್ನು ತಯಾರಿಸಿರುವುದಿಲ್ಲವೆಂದು, ಮುಂದಿನ ದಿನಗಳಲ್ಲಿ ವಲಯ ವ್ಯಾಪ್ತಿಯಲ್ಲಿ ಸಭೆಯನ್ನು ನಡೆಸಿ ಸಮಿತಿಯು ಕೋರಿರುವ ಎಲ್ಲಾ ಮಾಹಿತಿಗಳನ್ನು ಸಭೆಯ ನಡವಳಿಗಳೊಂದಿಗೆ ಸಲ್ಲಿಸುವುದಾಗಿ ಹಾಗೂ ಇನ್ನು ಮುಂದೆ ಪ್ರತಿ ತಿಂಗಳಿಗೊಮ್ಮೆ ಲೆಕ್ಕ ಪರಿಶೋಧನಾ ವರದಿಗಳಿಗೆ ಸಂಬಂಧಿಸಿದಂತೆ ಸಭೆಯನ್ನು ನಡೆಸುವುದಾಗಿ ಮತ್ತು ಲೆಕ್ಕ ಪರಿಶೋಧನಾ ವರದಿಗಳಿಗೆ ಸೂಕ್ತ ಕ್ರಮ ಕೈಗೊಳ್ಳದ ಅಧಿಕಾರಿ/ಸಿಬ್ಬಂದಿಗಳಿಗೆ ನೋಟೀಸ್ ಜಾರಿ ಮಾಡುವುದಾಗಿ ಇಲ್ಲವಾದಲ್ಲಿ ವೇತನವನ್ನು ತಡೆಹಿಡಿಯುವುದಾಗಿ ತಿಳಿಸಿದರು.

ಆಗ ಅಧ್ಯಕ್ಷರು ಸಹಾಯಕ ನಿಯಂತ್ರಕರು ಹಣಕಾಸು ರವರು ವಲಯ ವ್ಯಾಪ್ತಿಯ ವಿವಿಧ ಕಛೇರಿಗಳ ಯಾವುದೇ ಬಿಲ್‌ಗಳನ್ನು ಪಾವತಿಸುವ ಮುಂಚಿತವಾಗಿ ಸದರಿ ಕಛೇರಿಯವರು ಲೆಕ್ಕ ಪರಿಶೋಧನಾ ವರದಿಯಲ್ಲಿನ ಆಕ್ಷೇಪಣೆ, ವಸೂಲಾತಿ ಮತ್ತು ತೀರುವಳಿಗೆ ಸಂಬಂಧಿಸಿದಂತೆ ಅನುಸರಣಾ ವರದಿ ಸಲ್ಲಿಸಿರುವ ಬಗ್ಗೆ ಖಾತರಿ ಪಡಿಸಿಕೊಂಡು ಬಿಲ್‌ಗಳನ್ನು ಪಾವತಿಸುವಂತೆ ಕ್ರಮವಹಿಸಬೇಕೆಂದು ಸೂಚಿಸಿದರು.

ನಂತರ ಅಧ್ಯಕ್ಷರು, ಸಭೆಯಲ್ಲಿ ಹಾಜರಿದ್ದ ಉಪ ಆಯುಕ್ತರು ರವರಿಗೆ ಕೆ.ಎಂ.ಸಿ ಕಾಯ್ದೆ 440. 150ನೇ ಪ್ರಕರಣ ಮತ್ತು IX ನೇ ಅನುಸೂಚಿಯ ಪ್ರಕಾರ ಎಷ್ಟು ಪ್ರಕರಣಗಳಿಗೆ ಜುಲ್ಮಾನೆಯನ್ನು ವಿಧಿಸಲಾಗಿರುತ್ತದೆ ಎಂಬುದರ ಮಾಹಿತಿಯನ್ನು ಸಭೆಗೆ ಸಲ್ಲಿಸಲು ಸೂಚಿಸಿದಾಗ, ಯಲಹಂಕ ವಲಯ

ವ್ಯಾಪ್ತಿಯಲ್ಲಿ ಸದರಿ ನಿಯಮದ ಅಡಿಯಲ್ಲಿ ಯಾವುದೇ ದಂಡವನ್ನು ವಿಧಿಸಿರುವುದಿಲ್ಲವೆಂದು, ಮುಂದಿನ ದಿನಗಳಲ್ಲಿ ಇಂತಹ ಪ್ರಕರಣಗಳು ಕಂಡುಬಂದಲ್ಲಿ ನಿಯಮಾನುಸಾರ ಅಗತ್ಯ ಕ್ರಮವನ್ನು ವಹಿಸಲಾಗುವುದೆಂದು ಉಪ ಆಯುಕ್ತರು ಸಭೆಗೆ ಮಾಹಿತಿ ನೀಡಿದರು.

ನಂತರ ಉಪ ಆಯುಕ್ತರವರಿಗೆ ಯಲಹಂಕ ವಲಯಕ್ಕೆ ಸಂಬಂಧಿಸಿದಂತೆ ಬಾಕಿ ಇರುವ ಕಂಡಿಕೆಗಳಿಗೆ, ಆಕ್ಷೇಪಣೆಗಳಿಗೆ ಹಾಗೂ ವಸೂಲಾತಿಗೆ ಸಂಬಂದಿಸಿದ ವಿವರಗಳನ್ನು ಸಭೆಗೆ ಸಲ್ಲಿಸಲು ಸೂಚಿಸಲಾಗಿ, ಉಪ ಆಯುಕ್ತರವರು ತಾವು ಯಲಹಂಕ ವಲಯದಲ್ಲಿ ಕಳೆದ 2 ತಿಂಗಳಿನಿಂದ ಕರ್ತವ್ಯ ನಿರ್ವಹಿಸುತ್ತಿದ್ದು, ಲೆಕ್ಕ ಪರಿಶೋಧನಾ ವರದಿಗಳ ಆಕ್ಷೇಪಣೆ ಹಾಗೂ ವಸೂಲಾತಿಗೆ ಸಂಬಂಧಿಸಿದಂತೆ ಅಧೀನ ಅಧಿಕಾರಿಗಳಿಂದ ಮಾಹಿತಿಯನ್ನು ಪಡೆದು, ಪರಿಶೀಲಿಸಿ ಸಮಿತಿಗೆ ವರದಿ ಸಲ್ಲಿಸಲು ಕಾಲಾವಕಾಶ ನೀಡುವಂತೆ ಕೋರಿದ ಮೇರೆಗೆ, ಅದರಂತೆ ಅಗತ್ಯ ಕ್ರಮ ಕೈಗೊಳ್ಳಲು ಉಪ ಆಯುಕ್ತರವರಿಗೆ ಸೂಚಿಸುತ್ತಾ, ಇನ್ನು ಮುಂದೆ ವಲಯ ಮಟ್ಟದಲ್ಲಿ ಪ್ರತಿ ತಿಂಗಳಿಗೊಮ್ಮೆ ಲೆಕ್ಕಪತ್ರ ನಿರ್ವಹಣೆ ಕುರಿತಂತೆ ಅಧೀನ ಕಛೇರಿಗಳ ಅಧಿಕಾರಿಗಳ ಸಭೆಯನ್ನು ನಿಗಧಿಪಡಿಸಿ, ಚರ್ಚಿಸಿ ಕಾಲಕಾಲಕ್ಕೆ ಸಮಿತಿಗೆ ವರದಿಯನ್ನು ಸಲ್ಲಿಸಲು ಹಾಗೂ ಮುಂದಿನ ದಿನಗಳಲ್ಲಿ ಸಮಿತಿಯು ನಡೆಸುವ ಸಭೆಗೆ ಎಲ್ಲಾ ವಿವರಗಳೊಂದಿಗೆ ಹಾಜರಾಗಬೇಕೆಂದು ಸೂಚಿಸಲಾಯಿತು.

ಮುಂದುವರಿದು ಯಲಹಂಕ ವಲಯದ ಸಹಾಯಕ ಕಂದಾಯ ಅಧಿಕಾರಿ, ಕೊಡಿಗೇಹಳ್ಳಿ ಉಪವಲಯ, ಸಹಾಯಕ ಕಂದಾಯ ಅಧಿಕಾರಿ, ವಿದ್ಯಾರಣ್ಯಪುರ ಉಪವಲಯ, ಸಹಾಯಕ ಕಂದಾಯ ಅಧಿಕಾರಿ, ಯಲಹಂಕ ಉಪವಲಯ, ಕಛೇರಿಗಳಿಂದ ಹಾಜರಿದ್ದ ಅಧಿಕಾರಿಗಳು ಅವರವರ ಕಛೇರಿಗಳಿಗೆ ಸಂಬಂಧಪಟ್ಟಂತೆ ಲೆಕ್ಕ ಪರಿಶೋಧನಾ ವರದಿಯ ಬಾಕಿ ಇರುವ ಕಂಡಿಕೆ, ಆಕ್ಷೇಪಣೆ ಹಾಗೂ ವಸೂಲಾತಿ ಮತ್ತು ತೀರುವಳಿಗೆ ಸಂಬಂಧಿಸಿದಂತೆ ಅನುಸರಣಾ ವರದಿ ಸಲ್ಲಿಸಲು ಅಗತ್ಯ ಕ್ರಮಗಳನ್ನು ಕೈಗೊಂಡಿರುವುದಾಗಿ ತಿಳಿಸಿದರು. ಆಗ ಅಧ್ಯಕ್ಷರು ಹಾಜರಿದ್ದ ಸಹ ಕಂದಾಯ ಅಧಿಕಾರಿಗಳಿಗೆ ಅವರವರ ಕಛೇರಿಗಳಿಗೆ ಸಂಬಂಧಪಟ್ಟಂತೆ ಲೆಕ್ಕ ಪರಿಶೋಧನಾ ವರದಿಯಲ್ಲಿ ಬಾಕಿ ಇರುವ ಕಂಡಿಕೆಗಳಿಗೆ ಉತ್ತರಗಳನ್ನು ತಯಾರಿಸಿ, ಆಕ್ಷೇಪಣೆ ಮತ್ತು ವಸೂಲಾತಿಗೆ ಸೂಚಿಸಲಾಗಿರುವ ಮೊತ್ತವನ್ನು ವಸೂಲು ಮಾಡಲು ಕೂಡಲೇ ಕ್ರಮವಹಿಸಬೇಕೆಂದು, ಪಾಲಿಕೆಯ ಆರ್ಥಿಕ ಹಿತದೃಷ್ಟಿಯನ್ನು ಗಮನದಲ್ಲಿಟ್ಟುಕೊಂಡು ಎಲ್ಲಾ ಅಧಿಕಾರಿಗಳು ಈ ನಿಟ್ಟಿನಲ್ಲಿ ಕಾರ್ಯಪ್ರವೃತ್ತರಾಗಬೇಕೆಂದು ಸೂಚಿಸಿದರು.

ನಂತರ ಸಮಿತಿಯ ಸದಸ್ಯರಾದ ಶ್ರೀಯುತ ಗೌತಮ್ ಕುಮಾರ್ ರವರು ಮಾತನಾಡುತ್ತಾ ಯಲಹಂಕ ವಲಯ ವ್ಯಾಪ್ತಿಯಲ್ಲಿ ಎಸ್.ಎ.ಎಸ್ ಯೋಜನೆ ಅಡಿಯಲ್ಲಿ ಎಷ್ಟು ಸ್ವತ್ತುಗಳು ನೊಂದಣಿಯಾಗಿರುತ್ತದೆ. ಈ ಬಗ್ಗೆ ಸಂಪೂರ್ಣ ಮಾಹಿತಿಯನ್ನು ನೀಡಲು ಹಾಜರಿದ್ದ ಸಹ ಕಂದಾಯ ಅಧಿಕಾರಿಗಳಿಗೆ ಸೂಚಿಸಿದಾಗ, ಯಲಹಂಕ ವಲಯದಲ್ಲು ಸುಮಾರು 1,18,000 ಸ್ವತ್ತುಗಳು ಎಸ್.ಎ.ಎಸ್ ಯೋಜನೆ ಅಡಿಯಲ್ಲಿ ನೊಂದಣೆಯಾಗಿರುವುದಾಗಿ ತಿಳಿಸಿದಾಗ, ಸಂಬಂಧಪಟ್ಟ ವಾರ್ಡ್‍ಗಳ ಕರ ವಸೂಲಿಗಾರರು ಹಾಗೂ ಕಂದಾಯ ಪರಿವೀಕ್ಷಕರುಗಳು ಪ್ರತಿ ದಿನ ಕನಿಷ್ಠ 25 ಸ್ವತ್ತುಗಳನ್ನು ತಪಾಸಣೆ ಮಾಡಬೇಕೆಂಬ ನಿಯಮವಿದ್ದು, ಈ ಬಗ್ಗೆ ವಿವರಗಳನ್ನು ಕೇಳಿದಾಗ, ಹಾಜರಿದ್ದ ಸಹ ಕಂದಾಯ ಅಧಿಕಾರಿಗಳು ಸಮರ್ಪಕ ಉತ್ತರವನ್ನು ನೀಡುವಲ್ಲಿ ವಿಫಲರಾಗಿರುತ್ತಾರೆ. ಆಗ ಸದಸ್ಯರು ಸಹ ಕಂದಾಯ ಅಧಿಕಾರಿಗಳು ಈ ನಿಟ್ಟಿನಲ್ಲಿ ತಮ್ಮ ಅಧೀನದ ಕರ ವಸೂಲಿಗಾರರು ಮತ್ತು ಕಂದಾಯ ಪರಿವೀಕ್ಷಕರುಗಳು ಕರ್ತವ್ಯವನ್ನು ನಿರ್ವಹಿಸುವಂತೆ ನಿರ್ದೇಶನ ನೀಡಬೇಕೆಂದು ತಿಳಿಸಿದರು.

ನಂತರ ಕಾಮಗಾರಿ ವಿಭಾಗಕ್ಕೆ ಸಂಬಂಧಪಟ್ಟಂತೆ ಲೆಕ್ಕ ಪರಿಶೋಧನಾ ವರದಿಯ ವಿವರವಾದ ಮಾಹಿತಿಯನ್ನು ಸಭೆಗೆ ನೀಡಲು ಸೂಚಿಸಿದಾಗ, ಹಾಜರಿದ್ದ ಕಾರ್ಯಪಾಲಕ ಅಭಿಯಂತರರು, ಯಲಹಂಕ ವಿಭಾಗ, ಕಾರ್ಯಪಾಲಕ ಅಭಿಯಂತರರು, ಯೋಜನೆ ವಿಭಾಗ, ಕಾರ್ಯಪಾಲಕ ಅಭಿಯಂತರರು, ಬ್ಯಾಟರಾಯನಪುರ ವಿಭಾಗ, ಸ.ಕಾ.ನಿ.ಅ. ಬ್ಯಾಟರಾಯನಪುರ ಉಪವಿಭಾಗ, ಸ.ಕಾ.ನಿ.ಅ. ಯಲಹಂಕ ನ್ಯೂ ಟೌನ್, ಸ.ಕಾ.ನಿ.ಅ. ವಿದ್ಯಾರಣ್ಯಪುರ, ಸ.ಕಾ.ನಿ.ಅ. ಕೊಡಿಗೆಹಳ್ಳಿ, ರವರುಗಳು ಅವರವರ ಕಛೇರಿಗಳಿಗೆ ಸಂಬಂಧಪಟ್ಟಂತೆ ಲೆಕ್ಕ ಪರಿಶೋಧನಾ ವರದಿಯಲ್ಲಿ ಬಾಕಿ ಇರುವ ಕಂಡಿಕೆಗಳಿಗೆ ಉತ್ತರಗಳನ್ನು ತಯಾರಿಸಿ, ಆಕ್ಷೇಪಣೆ ಮತ್ತು ವಸೂಲಾತಿಗೆ ಸೂಚಿಸಲಾಗಿರುವ ಮೊತ್ತವನ್ನು ವಸೂಲು ಮಾಡಲು ಕ್ರಮವಹಿಸಲಾಗುತ್ತಿದೆಯೆಂದು, ಈ ಬಗ್ಗೆ ವರದಿಯನ್ನು ಸಮಿತಿಗೆ ಸಲ್ಲಿಸುವುದಾಗಿ ತಿಳಿಸಿದರು.

ನಂತರ ಆರೋಗ್ಯ ಇಲಾಖೆಗೆ ಸಂಬಂಧಪಟ್ಟಂತೆ ಲೆಕ್ಕ ಪರಿಶೋಧನಾ ವರದಿಯ ಸಂಪೂರ್ಣ ಮಾಹಿತಿಯನ್ನು ಸಭೆಗೆ ಸಲ್ಲಿಸಲು ಸೂಚಿಸಿದಾಗ, ಹಾಜರಿದ್ದ ವಲಯ ಆರೋಗ್ಯಾಧಿಕಾರಿಗಳು ಆರೋಗ್ಯ ವಿಭಾಗಕ್ಕೆ ಸಂಬಂಧಪಟ್ಟಂತೆ ಬಾಕಿ ಇರುವ ಕಂಡಿಕೆಗಳು, ಆಕ್ಷೇಪಣೆ ಮತ್ತು ವಸೂಲಾತಿಯ ಬಗ್ಗೆ ಕ್ರಮ ಕೈಗೊಂಡಿರುವುದಾಗಿ ತಿಳಿಸಿದರು. ಮುಂದುವರಿದು ಸದಸ್ಯರಾದ ಶ್ರೀ ಗೌತಮ್ ಕುಮಾರ್ ರವರು ಯಲಹಂಕ ವಲಯ ವ್ಯಾಪ್ತಿಯಲ್ಲಿನ ಕಲ್ಯಾಣ ಮಂಟಪಗಳ ಬಗ್ಗೆ ಮಾಹಿತಿಗಳನ್ನು ಕೇಳಿದಾಗ ಆರೋಗ್ಯ ಅಧಿಕಾರಿ ಯವರು ಕಲ್ಯಾಣ ಮಂಟಪಗಳಿಗೆ ಟ್ರೇಡ್ ಲೈಸನ್ಸ್ ನೀಡಿರುವುದಿಲ್ಲವೆಂದು ಆದಾಗ್ಯೂ ಅಲ್ಲಿ

ಸಮಾರಂಭಗಳನ್ನು ನಡೆಸುತ್ತಿದ್ದು, ಈ ಬಗ್ಗೆ ವಲಯ ಜಂಟಿ ಆಯುಕ್ತರವರಿಗೆ ಮಾಹಿತಿ ನೀಡಿರುವುದಾಗಿ ತಿಳಿಸಿದರು. ಆಗ ಸದಸ್ಯರು ಸದರಿ ವಿಷಯವನ್ನು ಮುಂದಿನ ಕೌನ್ಸಿಲ್ ಸಭೆಯಲ್ಲಿ ಚರ್ಚಿಸುವುದಾಗಿ ತಿಳಿಸುತ್ತಾ, ಜಂಟಿ ಆಯುಕ್ತರವರಿಗೆ ನೀಡಿರುವ ಸಂಪೂರ್ಣ ಮಾಹಿತಿಯನ್ನು ಸಮಿತಿಗೆ ಸಲ್ಲಿಸಲು ಸೂಚಿಸಿದರು.

ನಂತರ ಅಧ್ಯಕ್ಷರು ನಗರ ಯೋಜನೆ ವಿಭಾಗಕ್ಕೆ ಸಂಬಂಧಿಸಿದಂತೆ ಮಾಹಿತಿ ಕೇಳಿದಾಗ, ಹಾಜರಿದ್ದ ಸಹಾಯಕ ನಿರ್ದೇಶಕರು ನಗರ ಯೋಜನೆ ರವರು ಸಮಿತಿಯು ಕೇಳಿದ ಯಾವುದೇ ಮಾಹಿತಿಯನ್ನು ನೀಡುವಲ್ಲಿ ಸಂಪೂರ್ಣ ವಿಫಲರಾಗಿರುತ್ತಾರೆ. ಆಡಿಟ್ ವರದಿಯನ್ನು ಪರಿಶೀಲಿಸಿದಾಗ ಕಟ್ಟಡ ಕಾರ್ಮಿಕರ ಕಲ್ಯಾಣ ನಿಧಿ ವಂತಿಕೆಗೆ ಸಂಬಂಧಿಸಿದಂತೆ ಹೆಚ್ಚಾಗಿ ಅಕ್ಷೇಪಣೆ ಇದ್ದು, ಈ ಬಗ್ಗೆ ಅಗತ್ಯ ಕ್ರಮ ಕೈಗೊಳ್ಳಲು ಹಾಗೂ ಸಮಿತಿಗೆ ಸಂಪೂರ್ಣ ಮಾಹಿತಿಯನ್ನು ಸಲ್ಲಿಸಲು ಅಧ್ಯಕ್ಷರು ಸೂಚಿಸಿದರು.

ನಂತರ ಸಮಿತಿಯ ಸದಸ್ಯರಾದ ಶ್ರೀಯುತ ಗೌತಮ್ ರವರು ಮಾತನಾಡುತ್ತಾ, ಸಮಿತಿಯು ಪಾಲಿಕೆಯ ಆರ್ಥಿಕ ಹಿತದೃಷ್ಟಿಯನ್ನು ಗಮನದಲ್ಲಿಟ್ಟುಕೊಂಡು, ಪಾಲಿಕೆಯನ್ನು ಆರ್ಥಿಕ ಅಭಿವೃದ್ಧಿಯತ್ತ ಕೊಂಡೊಯ್ಯುವ ನಿಟ್ಟಿನಲ್ಲಿ ಕಾರ್ಯಯೋಜನೆಯನ್ನು ರೂಪಿಸಿದ್ದು, ಅದಕ್ಕೆ ಪೂರಕವಾಗಿ ಲೆಕ್ಕ ಪರಿಶೋಧನಾ ವರದಿಯಲ್ಲಿನ ಆಕ್ಷೇಪಣೆ, ವಸೂಲಾತಿಗೆ ಸಂಬಂಧಿಸಿದಂತೆ ಸೂಕ್ತ ಕ್ರಮ ಕೈಗೊಳ್ಳಲು ಎಲ್ಲಾ ಅಧಿಕಾರಿಗಳು ಕರ್ತವ್ಯವನ್ನು ನಿರ್ವಹಿಬೇಕೆಂದು, ಅಲ್ಲದೆ ಸಮಿತಿಯು ಯಾವುದೇ ಸಮಯದಲ್ಲಿ ಕಛೇರಿಗಳಿಗೆ ತಪಾಸಣೆಗೆ ಬರುವುದಾಗಿ ತಿಳಿಸಿ, ಲೆಕ್ಕಪತ್ರ ನಿರ್ವಹಣೆಯಲ್ಲಿ ಲೋಪದೋಷಗಳು ಕಂಡುಬಂದಲ್ಲಿ ಸಂಬಂಧಪಟ್ಟ ಅಧಿಕಾರಿಗಳ ವಿರುದ್ದ ನಿರ್ದಾಕ್ಷಿಣ್ಯ ಕ್ರಮ ಕೈಗೊಳ್ಳಲಾಗುವುದೆಂದು ತಿಳಿಸಿದರು.

ಕೊನೆಯಲ್ಲಿ ಅಧ್ಯಕ್ಷರು ಮಾತನಾಡುತ್ತಾ, ಸಭೆಯಲ್ಲಿ ಚರ್ಚಿಸಿದ ವಿಷಯಗಳ ಬಗ್ಗೆ ಎಲ್ಲಾ ಅದಿಕಾರಿ/ಸಿಬ್ಬಂದಿಗಳು ಸೂಕ್ತ ಕ್ರಮ ವಹಿಸಬೇಕೆಂದು ಹಾಗೂ ಸಮಿತಿಯು ಪಾಲಿಕೆಯ ಆರ್ಥಿಕ ಹಿತದೃಷ್ಟಿಯನ್ನು ಗಮನದಲ್ಲಿಟ್ಟುಕೊಂಡು, ಪಾಲಿಕೆಯನ್ನು ಆರ್ಥಿಕ ಅಭಿವೃದ್ಧಿಯತ್ತ ಕೊಂಡೊಯ್ಯುವ ನಿಟ್ಟಿನಲ್ಲಿ ಕಾರ್ಯಯೋಜನೆಯನ್ನು ರೂಪಿಸಿದ್ದು, ಈ ಹಿನ್ನೆಲೆಯಲ್ಲಿ ಸಮಿತಿಯು ಕೋರಿರುವ ಎಲ್ಲಾ ಮಾಹಿತಿಗಳನ್ನು ಸಲ್ಲಿಸಲು ಸೂಚಿಸುತ್ತಾ, ಅಧಿಕಾರಿ/ಸಿಬ್ಬಂದಿಗಳು ಕಛೇರಿಯ ಲೆಕ್ಕಪತ್ರಗಳ ನಿರ್ವಹಣೆಯಲ್ಲಿ ಅಸಡ್ಡೆ ಮನೋಭಾವವನ್ನು ತೋರದೆ ಕರ್ತವ್ಯವನ್ನು ನಿರ್ವಹಿಸಬೇಕೆಂದು ಅಲ್ಲದೆ ಲೆಕ್ಕ ಪತ್ರಗಳಿಗೆ ಸಂಬಂಧಿಸಿದಂತೆ ಯಾವುದೇ ಮಾಹಿತಿಯು ಬೇಕಾದಲ್ಲಿ ಕೇಂದ್ರ ಕಛೇರಿಯ ಆಡಿಟ್ ಸೆಲ್ ವಿಭಾಗದಿಂದ

ಪಡೆಯತಕ್ಕದ್ದೆಂದು ತಿಳಿಸಿದರು. ಆಗ ಆಡಿಟ್ ಸೆಲ್ ವಿಭಾಗದ ಅಧಿಕಾರಿಗಳು ಈ ಬಗ್ಗೆ ಸಂಪೂರ್ಣ ಸಹಕಾರ ನೀಡುವುದಾಗಿ ತಿಳಿಸಿದರು.

ಉಪ ಆಯುಕ್ತರವರು ಮಾತನಾಡುತ್ತಾ ಮಾನ್ಯ ಅಧ್ಯಕ್ಷರು ಹಾಗೂ ಸದಸ್ಯರುಗಳು ಸಭೆಯಲ್ಲಿ ಚರ್ಚಿಸಿ ಸೂಚಿಸಿರುವ ವಿಷಯಗಳಿಗೆ ಸಂಬಂಧಿಸಿದಂತೆ ಅಗತ್ಯ ಕ್ರಮ ಕೈಗೊಳ್ಳುವುದಾಗಿ, ಈ ನಿಟ್ಟಿನಲ್ಲಿ ಬೇಜವಾಬ್ದಾರಿತನ ತೋರುವ ಅಧಿಕಾರಿಗಳ ವಿರುದ್ದ ಸೂಕ್ತ ಕ್ರಮ ಕೈಗೊಳ್ಳುವುದಾಗಿ ತಿಳಿಸುತ್ತಾ ಸಭೆಯನ್ನು ವಂದನೆಯೊಂದಿಗೆ ಮುಕ್ತಾಯಗೊಳಿಸಿದರು.

ಅಧ್ಯಕ್ಷರು
ಲೆಕ್ಕಪತ್ರ ಸ್ಥಾಯಿ ಸಮಿತಿ

**ಪ್ರತಿಯನ್ನು:**
1.ಪೂಜ್ಯ ಮಹಾಪೌರರು ರವರ ಅವಗಾಹನೆಗೆ ತರಲು ವಿಶೇಷ ಕರ್ತವ್ಯಾಧಿಕಾರಿ ರವರಿಗೆ ಕಳುಹಿಸಿದೆ.
2.ಮಾನ್ಯ ಉಪ ಮಹಾಪೌರ ರವರ ಅವಗಾಹನೆಗೆ ತರಲು ಆಪ್ತ ಕಾರ್ಯದರ್ಶಿರವರಿಗೆ ಕಳುಹಿಸಿದೆ.
3.ಮಾನ್ಯ ಆಯುಕ್ತರು ರವರಿಗೆ ಅಗತ್ಯ ಕ್ರಮಕ್ಕಾಗಿ ಕಳುಹಿಸಿದೆ.
4.ಮಾನ್ಯ ಆಡಳಿತ ಪಕ್ಷದ ನಾಯಕರಿಗೆ, ಮಾನ್ಯ ವಿರೋಧ ಪಕ್ಷದ ನಾಯಕರಿಗೆ, ಮಾನ್ಯ ಜೆ.ಡಿ.ಎಸ್. ಪಕ್ಷದ ನಾಯಕರಿಗೆ ಮಾಹಿತಿಗಾಗಿ ಕಳುಹಿಸಿದೆ.
5.ಜಂಟಿ ಆಯುಕ್ತರು (ಯಲಹಂಕ) ರವರಿಗೆ ಮುಂದಿನ ಸೂಕ್ತ ಕ್ರಮಕ್ಕಾಗಿ
6.ಮುಖ್ಯ ಲೆಕ್ಕಾಧಿಕಾರಿಯವರ ಮಾಹಿತಿಗಾಗಿ
7.ಉಪ ಆಯುಕ್ತರು (ಯಲಹಂಕ) ರವರಿಗೆ ಕಳುಹಿಸುತ್ತಾ, ಸಭೆಯಲ್ಲಿ ಚರ್ಚಿಸಿದಂತೆ ಅಗತ್ಯ ಕ್ರಮಗಳನ್ನು ಕೈಗೊಂಡು ಸಮಿತಿಗೆ ವರದಿ ಸಲ್ಲಿಸಲು ಸೂಚಿಸಿದೆ
8.ಕಛೇರಿ ಕಡತಕ್ಕೆ